# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟ್‌ಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ /2018-19

ದಿನಾಂಕ: 05-01-2019.

**ದಿನಾಂಕ:- 05-01-2019 ರಂದು ವಾರ್ಡ್ ನಂ.61 ರ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು:-**

**ಸಭೆಗೆ ಹಾಜರಿದ್ದವರು:-**

1. ಬಿ.ಬಿ.ಎಂ.ಪಿ ವಾರ್ಡ್ ಸಂಖ್ಯೆ:61 ರ ಮಾನ್ಯ ಸದಸ್ಯರು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರಾದ ಶ್ರೀ.ಮೊಹಮ್ಮದ್ ಜಮೀರ್ ಷಾ ರವರು.
2. ಸಹಾಯಕ ಅಭಿಯಂತರರು, ವಾರ್ಡ್ ನಂ.61 ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ರಂಗನಾಥ್.ಹೆಚ್ ವಾರ್ಡ್ ಸಮಿತಿಯ ಸಮಿತಿ ಸದಸ್ಯರು ಸಭೆಗೆ ಹಾಜರಿದ್ದರು.
3. ಸಹಾಯಕ ಕಂದಾಯ ಅಧಿಕಾರಿಗಳು (ಪುಲಿಕೇಶಿನಗರ) ರವರು.
4. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ವಿಭಾಗ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು ಪುಲಿಕೇಶಿನಗರ ಉಪವಿಭಾಗ.
   ಸಹಾಯಕ ಕಾರ್ಯಪಾಲಕ ಅಭಿಯಂತರರು /ವಿದ್ಯುತ್ /ಸ್ಟ್ರೀಟ್ ಲೈಟ್/ ಕಂದಾಯ ಪರಿವೀಕ್ಷಕರು/ಕಂದಾಯ ವಸೂಲಿಗಾರರು/ಕಛೇರಿ ನೌಕರರು

ವಾರ್ಡ್ ಸಮಿತಿಯ ಸಭೆಯನ್ನು ಪ್ರಾರಂಭಗೊಳ್ಳುತ್ತಿದಂತೆ ಅಧ್ಯಕ್ಷರಾದ ಶ್ರೀ.ಮೊಹಮ್ಮದ್ ಜಮೀರ್ ಷಾ ರವರು ಪಾಲಿಕೆಯ ವಾರ್ಡ್ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

1. ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ್ದ ವಿಷಯಗಳ ಬಗ್ಗೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.
2. ಬೀದಿ ದೀಪಗಳು ಎಲ್.ಇ.ಡಿ ದೀಪಗಳ ರಿಪೇರಿಗಳ ಬಗ್ಗೆ ಚರ್ಚಿಸಿ ಸಂಬಂಧಪಟ್ಟ ವಿದ್ಯುತ್ ವಿಭಾಗದ ಅಭಿಯಂತರರು ಒಂದು ವಾರದೊಳಗೆ ಸರಿಪಡಿಸಲು ತಿಳಿಸಲಾಗಿರುತ್ತದೆ.
3. ಬೋರ್ ಬ್ಯಾಂಕ್ ರಸ್ತೆಯ ಪಾದಚಾರಿ ಮಾರ್ಗಗಳ ಮೇಲೆ ಹಾಕಿರುವ ತರಕಾರಿ ಅಂಗಡಿಗಳನ್ನು ತೆರವುಗೊಳಿಸಲು ತಿಳಿಸಲಾಗಿರುತ್ತದೆ.
4. ಮದೀನ ಮೋಹಲ್ಲಾದ ರಾಜ ಕಾಲುವೆಯಲ್ಲಿ ಹೂಳು ತುಂಬಿದ್ದು, ಕೂಡಲೇ ತೆರವುಗೊಳಿಸಲು ತಿಳಿಸಲಾಗಿರುತ್ತದೆ.
5. ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ.ಟಿ.ವಿ ಅಳವಡಿಸುವ ಬಗ್ಗೆ ಕ್ರಮ ಕೈಗೊಳ್ಳಲು ಕಮಿಟಿ ಸದಸ್ಯರು ತಿಳಿಸಿರುತ್ತಾರೆ.
6. ಎ.ಕೆ.ಕಾಲೋನಿ 2ನೇ, 3ನೇ ಮತ್ತು 4ನೇ ಅಡ್ಡರಸ್ತೆಗಳಲ್ಲಿ ಬಿದ್ದಿರುವ ಡೆಬ್ರೀಸ್ ಅನ್ನು ತೆರವುಗೊಳಿಸಲು ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ತಿಳಿಸಿರುತ್ತಾರೆ.
7. ಮದೀನಾ ಮೊಹಲ್ಲಾ ಅಡ್ಡರಸ್ತೆಗಳಲ್ಲಿ ಬಿದ್ದಿರುವ ಡೆಬ್ರೀಸ್ ಅನ್ನು ತೆರವುಗೊಳಿಸಲು ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ತಿಳಿಸಿರುತ್ತಾರೆ.

Scanned by CamScanner

8. ಮೋದಿ ರಸ್ತೆ 5ನೇ, 8ನೇ ಮತ್ತು 2ನೇ ಅಡ್ಡರಸ್ತೆಗಳಲ್ಲಿ ಬಿದ್ದಿರುವ ಡೆಬ್ರಿಸ್ ಅನ್ನು ತೆರವುಗೊಳಿಸಲು ವಾರ್ಡ್ ಕಮಿಟಿ ಸದಸ್ಯರು ಸಭೆಯಲ್ಲಿ ತಿಳಿಸಿರುತ್ತಾರೆ.
9. ಐ.ಟಿ.ಐ ಲೇಔಟ್ ಪಾರ್ಕಿನ ಹತ್ತಿರ ಹಾಳಾಗಿರುವ ಡೆಕ್ ಸ್ಲಾಬ್ ಕಾಮಗಾರಿ ತೆಗೆದುಕೊಳ್ಳುವ ಬಗ್ಗೆ ತೀರ್ಮಾನಿಸಲಾಗಿರುತ್ತದೆ.
10. ಎಸ್.ಕೆ.ಗಾರ್ಡನ್ 5ನೇ ಮುಖ್ಯರಸ್ತೆಯ ಅಪಾರ್ಟ್‌ಮೆಂಟ್‌ನ ಹತ್ತಿರದಲ್ಲಿ ಚರಂಡಿ ಹೂಳು ತುಂಬಿಕೊಂಡಿದ್ದು ಅದನ್ನು ತೆರವುಗೊಳಿಸಲು ತಿಳಿಸಿರುತ್ತಾರೆ.
11. ಚಿನ್ನಪ್ಪ ಗಾರ್ಡನ್‌ನಲ್ಲಿರುವ ಅಂಗನವಾಡಿ ಕಟ್ಟಡವು ಶಿಥಿಲಗೊಂಡಿದ್ದು, ಸದರಿ ಕಟ್ಟಡದ ರಿಪೇರಿ / ಹೊಸದಾಗಿ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಕ್ರಮವಹಿಸಲು ತೀರ್ಮಾನಿಸಲಾಗಿರುತ್ತದೆ.
12. ಬಸಪ್ಪ ಲೇನ್ ಬಡಾವಣೆಯಲ್ಲಿರುವ ಹಳೆಯ ಸಾರ್ವಜನಿಕ ಶೌಚಾಲಯವನ್ನು ತೆರವುಗೊಳಿಸಿ ಹೊಸ ಶೌಚಾಲಯವನ್ನು ನಿರ್ಮಿಸುವ ಬಗ್ಗೆ ಕ್ರಮವಹಿಸಲು ತೀರ್ಮಾನಿಸಲಾಗಿರುತ್ತದೆ.
13. ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 45434 ಜನ ಸಂಖ್ಯೆ ಹಾಗೂ 11252 ಮನೆಗಳು ಇರುವುದರ ಬಗ್ಗೆ ಹಾಗೂ ಸಮರ್ಪಕ ಕಸ ವಿಲೇವಾರಿ ನಿರ್ವಹಣೆಗಾಗಿ ಒಟ್ಟು 15 ಬ್ಲಾಕ್‌ಗಳಾಗಿ ವಿಂಗಡಿಸಲಾಗಿರುತ್ತದೆ ಎಂಬ ವಿಷಯವನ್ನು ಕಿರಿಯ ಆರೋಗ್ಯ ನಿರೀಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.
14. ಕಮಿಟಿಯ ಎಲ್ಲಾ ಸದಸ್ಯರು ತಮ್ಮ ತಮ್ಮ ಏರಿಯಾದಲ್ಲಿ ತಪಾಸಣೆ ನಡೆಸಿ ಉಳಿದ ಕೆಲಸ ಕಾರ್ಯಗಳ ಬಗ್ಗೆ ಮಾಹಿತಿ ನೀಡಲು ತಿಳಿಸಿದರು.

ನಂತರ ಮುಂದಿನ ಸಭೆಯೊಳಗೆ ಈ ಎಲ್ಲಾ ಕೆಲಸ ಕಾರ್ಯಗಳ ಬಗ್ಗೆ ಪಟ್ಟಿ ನೀಡಬೇಕೆಂದು ಎಲ್ಲಾ ಸದಸ್ಯರಿಗೆ ತಿಳಿಸಿ ಎಲ್ಲಾ ಕೆಲಸ ಕಾರ್ಯಗಳನ್ನು ಆಧ್ಯತೆ ನೀಡಿ ಮುಕ್ತಾಯಗೊಳಿಸಲು ಸೂಚಿಸುತ್ತಾ, ಮುಂದಿನ ಸಭೆಯನ್ನು ದಿನಾಂಕ: 02-02-2019 ರಂದು ನಿಗಧಿಪಡಿಸಿ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ

ಅಧ್ಯಕ್ಷರು

ಪ್ರತಿಯನ್ನು:

1. ಪೂಜ್ಯ ಮಹಾಪೌರರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಪೂಜ್ಯ ಉಪ ಮಹಾಪೌರರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಾರ್ಯದರ್ಶಿಗಳು, ಕೌನ್ಸಿಲ್ ಕಾರ್ಯಾಲಯ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
5. ವಾರ್ಡ್ ಸಮಿತಿಯ ಸದಸ್ಯರು, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
6. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
7. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
8. ಕಾರ್ಯಪಾಲಕ ಅಭಿಯಂತರರು (ಮಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಮಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned by CamScanner